# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **830** |
| ಸದಸ್ಯರ ಹೆಸರು | : | ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 15-12-2025 |
| ಉತ್ತರಿಸುವ ಸಚಿವರು | : | ಮಾನ್ಯ ಇಂಧನ ಸಚಿವರು |

***

| | ಪ್ರಶ್ನೆ | ಉತ್ತರ |
|---|---|---|
| ಅ) | ಬಿ-ಖಾತಾ (ಫಾರ್ಮ್-ಬಿ ರಿಜಿಸ್ಟರ್) ನಿವೇಶನಗಳಲ್ಲಿ ನಿರ್ಮಿಸಲಾದ ಕಟ್ಟಡಗಳಿಗೆ ಬೆಸ್ಕಾಂ/ಎಸ್ಕಾಂ ಮತ್ತು ಇತರ ವಿದ್ಯುತ್ ಸರಬರಾಜು ನಿಗಮಗಳು ವಿದ್ಯುತ್ ಸರಬರಾಜು ನಿರಾಕರಿಸುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರು ವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಿವಿಲ್ ಅಪೀಲ್ ಆದೇಶ ಸಂಖ್ಯೆ: 14604/2024 ಮತ್ತು 14605/2024 ದಿನಾಂಕ: 17.12.2024 ರಂದು ನೀಡಿರುವ ಆದೇಶದಲ್ಲಿ, ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ನೀಡುವಾಗ ಸಕ್ಷಮ/ಸ್ಥಳೀಯ ಪ್ರಾಧಿಕಾರದಿಂದ ನೀಡುವ ವಾಸಯೋಗ್ಯ/ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಅರ್ಜಿದಾರರು ಸಲ್ಲಿಸುವುದು ಕಡ್ಡಾಯವಾಗಿರುತ್ತದೆ. ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಿವಿಲ್ ಅಪೀಲ್ ನಂಬರ್ - 14604/2024 para 21 (iv) ರಂತೆ ಆದೇಶವು ಈ ಕೆಳಗಿನಂತಿರುತ್ತದೆ.<br><br>**"All the necessary service connections, such as, Electricity, Water supply, Sewerage connection etc. shall be given by the service provider / Board to the buildings only after the production of the completion / Occupation Certificate."**<br><br>ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯಲ್ಲಿ 1200 ಚದರ ಅಡಿ ವಿಸ್ತೀರ್ಣದವರೆಗಿನ ನಿವೇಶನಗಳಲ್ಲಿ ನಕ್ಷೆ ಮಂಜೂರಾತಿ ಪಡೆದು ನಿರ್ಮಿಸುವ ನೆಲ+ 2 ಅಂತಸ್ತು ಅಥವಾ Stilt + 3 ಅಂತಸ್ತಿನವರೆಗಿನ ವಾಸದ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣ ಪತ್ರ (Occupancy Certificate) ಪಡೆಯುವುದರಿಂದ ಸರ್ಕಾರದ ಆದೇಶ ಸಂಖ್ಯೆ:ನಅಇ 334 ಎಂಎನ್‌ಯು 2025, ದಿನಾಂಕ:09.09.2025 ರಲ್ಲಿ ವಿನಾಯಿತಿ ನೀಡಿದೆ.<br><br>ರಾಜ್ಯದ ಮಹಾನಗರಗಳ ಪಾಲಿಕೆಯ ವ್ಯಾಪ್ತಿಯಲ್ಲಿ 1200 ಚದರ ಅಡಿ ವಿಸ್ತೀರ್ಣದವರೆಗಿನ ನಿವೇಶನಗಳಲ್ಲಿ ನಿರ್ಮಿಸಿರುವ ನೆಲ+ 2 ಅಂತಸ್ತು ಅಥವಾ Stilt + 3 ಅಂತಸ್ತಿನವರೆಗಿನ ವಾಸದ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣ ಪತ್ರ (Occupancy Certificate) ಪಡೆಯುವುದರಿಂದ |

<table>
<tr><td>ಆ)</td><td>ಮಾನವೀಯ ಮತ್ತು ನ್ಯಾಯಯುತ ಆಧಾರದ ಮೇಲೆ ಅಂತಹ ಪ್ರದೇಶಗಳ ನಿವಾಸಿಗಳಿಗೆ ಗೃಹಬಳಕೆಯ ವಿದ್ಯುತ್ ಸಂಪರ್ಕಗಳನ್ನು ಒದಗಿಸುವಂತೆ ಬೆಸ್ಕಾಂ/ಎಸ್ಕಾಂಗೆ ಸೂಚಿಸಲು ಸರ್ಕಾರ ತುರ್ತು ಕ್ರಮಗಳನ್ನು ತೆಗೆದುಕೊಳ್ಳುತ್ತಿದೆಯೇ;</td><td rowspan="3">ಸರ್ಕಾರದ ಆದೇಶ ಸಂಖ್ಯೆ:ನಅಇ 283 ಎಂಎನ್ಇ 2025 (ಇ), ದಿನಾಂಕ:24.10.2025 ರಲ್ಲಿ ವಿನಾಯಿತಿ ನೀಡಿದೆ.<br><br>ಅದೇ ರೀತಿ ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ (ಮಹಾನಗರಪಾಲಿಕೆಗಳನ್ನು ಹೊರತುಪಡಿಸಿ) ವ್ಯಾಪ್ತಿಯಲ್ಲಿ 1200 ಚದರ ಅಡಿ ವಿಸ್ತೀರ್ಣದವರೆಗಿನ ನಿವೇಶನಗಳಲ್ಲಿ ನಿರ್ಮಿಸಿರುವ ನೆಲ+ 2 ಅಂತಸ್ತು ಅಥವಾ Stilt + 3 ಅಂತಸ್ತಿನವರೆಗಿನ ವಾಸದ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣ ಪತ್ರ (Occupancy Certificate) ಪಡೆಯುವುದರಿಂದ ಸರ್ಕಾರದ ಆದೇಶ ಸಂಖ್ಯೆ:ನಅಇ 244 ಜಿ.ಇ.ಎಲ್ 2025, ದಿನಾಂಕ:24.10.2025 ರಲ್ಲಿ ವಿನಾಯಿತಿ ನೀಡಿದೆ.<br><br>ಮುಂದುವರೆದು, ಗ್ರಾಮೀಣ ಪ್ರದೇಶಗಳಿಗೆ ಸಂಬಂಧಿಸಿದಂತೆ, ಸಾರ್ವಜನಿಕರ ಅನುಕೂಲವನ್ನು ಗಮನದಲ್ಲಿರಿಸಿಕೊಂಡು, ಸಣ್ಣ ಪ್ರಮಾಣದ ವಸತಿ ಕಟ್ಟಡಗಳಿಗೆ ಸ್ವಾಧೀನಾನುಭವ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಪಡೆಯುವುದರಿಂದ ವಿನಾಯಿತಿ ನೀಡುವ ಪ್ರಸ್ತಾವನೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ.<br><br>ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣಾ ಆಯೋಗದ ವಿದ್ಯುತ್ ಸರಬರಾಜು ನಿಯಮಗಳ ಷರತ್ತು 4.00 ರಲ್ಲಿ ಸೂಚಿಸಿರುವ ದಾಖಲೆಗಳಾದ ಸ್ವತ್ತಿನ ಮಾಲೀಕತ್ವದ ದಾಖಲೆ ಹಾಗು ಅರ್ಜಿದಾರರ ಗುರುತಿನ ಚೀಟಿ ಜೊತೆಗೆ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಕಟ್ಟಡಕ್ಕೆ ಸಂಬಂಧಿಸಿದ ಸಕ್ಷಮ/ಸ್ಥಳೀಯ ಪ್ರಾಧಿಕಾರದಿಂದ ನೀಡುವ ವಾಸಯೋಗ್ಯ/ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಅರ್ಜಿದಾರರು ಸಲ್ಲಿಸಿದಲ್ಲಿ, ವಿದ್ಯುತ್ ಸರಬರಾಜು ಕಂಪನಿಗಳು ನಿಯಮಾನುಸಾರ ಯಾವುದೇ ವಿಳಂಬವಿಲ್ಲದೆ ವಿದ್ಯುತ್ ಸಂಪರ್ಕವನ್ನು ಕಲ್ಪಿಸಲು ಕ್ರಮಕೈಗೊಳ್ಳುತ್ತವೆ.</td></tr>
<tr><td>ಇ)</td><td>ಬಿ-ಖಾತಾ ನಿವೇಶನಗಳಲ್ಲಿರುವ ಮನೆಗಳಿಗೆ ವಿದ್ಯುತ್ ಸರಬರಾಜು ನಿರ್ಬಂಧಿಸುವ ಯಾವುದೇ ಆದೇಶಗಳು ಅಥವಾ ಸುತ್ತೋಲೆಗಳನ್ನು ಸರ್ಕಾರ ಹೊರಡಿಸಿದೆಯೇ; ಹಾಗಿದ್ದಲ್ಲಿ, ಅಂತಹ ಅಗತ್ಯ ಸೇವೆಗಳನ್ನು ನಿರಾಕರಿಸಲು ಕಾನೂನು ಸಮರ್ಥನೆ ಏನು;</td></tr>
<tr><td>ಈ)</td><td>ಬಿ-ಖಾತಾ ನಿವೇಶನಗಳ ನಿವಾಸಿಗಳಿಗೆ ಮೂಲಭೂತ ಮೂಲಸೌಕರ್ಯ ಕಲ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?</td></tr>
</table>

ಸಂಖ್ಯೆ: ಎನರ್ಜಿ 292 ಇಬಿಎಸ್ 2025

(ಕೆ.ಜೆ.ಜಾರ್ಜ್)
ಇಂಧನ ಸಚಿವರು.